ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಚೇರಿ, ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗರಸ್ತೆ, ಕೆ.ಆರ್.ಸರ್ಕಲ್, ಬೆಂಗಳೂರು-560 001**

ಸಂಖ್ಯೆ: ಪ್ರಾಶಿಅ/ಆರ್.ಟಿ.ಇ/ದಾಖಲಾತಿ /473/2015-16 ದಿನಾಂಕ:16-02-2016

ರವರಿಗೆ,
ರಾಜ್ಯದ ಎಲ್ಲಾ ಉಪನಿರ್ದೇಶಕರುಗಳು(ಆಡಳಿತ) ಮತ್ತು
ರಾಜ್ಯದ ಎಲ್ಲಾ ವಲಯ/ತಾಲ್ಲುಕು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳು,
ಸಾರ್ವಜನಿಕ ಶಿಕ್ಷಣ ಇಲಾಖೆ.

ಮಾನ್ಯರೆ.

ವಿಷಯ: 2016-17 ನೇ ಸಾಲಿನ ಆರ್.ಟಿ.ಇ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ಆರ್.ಟಿ.ಇ. ಸಹಾಯವಾಣಿ ಸಕ್ರಿಯಗೊಳಿಸುವುದರ ಜೊತೆಗೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಸಹಾಯವಾಣಿ ತೆರೆಯುವ ಬಗ್ಗೆ.

ಉಲ್ಲೇಖ: 1. ಉಚಿತ ಮತ್ತುಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ಕಾಯಿದೆ -2009
2. ಕರ್ನಾಟಕಉಚಿತ ಮತ್ತುಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012.
3. ಸರ್ಕಾರದ ಆದೇಶ ಸಂಖ್ಯೆ ಇಡಿ 51 ಪಿಜಿಸಿ 2016, ದಿನಾಂಕ:08-02-2016.
4. ದಿನಾಂಕ: 16.02.2016 ರ ಮಾನ್ಯ ಶಿಕ್ಷಣ ಸಚಿವರ ಸಭೆಯಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಸೂಚನೆಯ ಮೇರೆಗೆ.

*******

1. 2016-17 ನೇ ಸಾಲಿಗೆ ಆರ್.ಟಿ.ಇ ಪ್ರವೇಶ ಪ್ರಕ್ರಿಯೆಗೆ ಸಂಬಂಧಿಸಿದಂತೆ ದಿನಾಂಕ: 23.02.2016 ರಿಂದ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗುವುದು.
2. ಆನ್-ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲಿ ಪೋಷಕರಿಗೆ ತೊಂದರೆಯಾಗದಂತೆ ಶಾಲಾ ಹಂತದಲ್ಲಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಆನ್‌ಲೈನ್ ಅರ್ಜಿ ಸಲ್ಲಿಸಲು ಅನುಕೂಲ ಕಲ್ಪಿಸಲು ಸೂಚಿಸಲಾಗಿದೆ.
3. ಇವುಗಳಲ್ಲದೇ, ಪೋಷಕರು/ಸಾರ್ವಜನಿಕರಿಗೆ ಹೆಚ್ಚಿನ ರೀತಿಯಲ್ಲಿ ಸಹಾಯ ಕಲ್ಪಿಸುವ ನಿಟ್ಟಿನಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಹೆಚ್ಚುವರಿಯಾಗಿ ಗಣಕಯಂತ್ರಗಳನ್ನು ಅಳವಡಿಸಿಕೊಂಡು ಸಮರ್ಪಕ ರೀತಿಯಲ್ಲಿ ಕರ್ತವ್ಯ ನಿರ್ವಹಿಸುವ (DATA ENTRY OPERATOR) ಡಿಇಓ ಗಳನ್ನು ನಿಯೋಜಿಸಿಕೊಳ್ಳಲು ಉಲ್ಲೇಖ(4)ರಲ್ಲಿ ಸೂಚಿಸಿರುತ್ತಾರೆ.

   ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಗಣಕ ಯಂತ್ರಗಳ ಕರ್ತವ್ಯ ನಿರ್ವಹಿಸುವ (DATA ENTRY OPERATOR) ಡಿಇಓ ಗಳ ಕೊರತೆ ಕಂಡುಬಂದಲ್ಲಿ ಜಿಲ್ಲಾ ಡಯಟ್‌ಗಳಿಂದ ಗಣಕ ಯಂತ್ರ ಮತ್ತು ಡಿಇಓ ಗಳನ್ನು ಪ್ರವೇಶ ಪ್ರಕ್ರಿಯೆ ಮುಗಿಯುವ ವರೆಗೂ ನಿಯೋಜಿಸಿಕೊಳ್ಳಲು ಸೂಚಿಸಲಾಗಿದೆ.

—2

4. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗುವ ಹಿನ್ನೆಲೆಯಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ರಾಜರಾಜೇಶ್ವರಿನಗರ ಮತ್ತು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಬೆಂಗಳೂರು ಗ್ರಾಮಾಂತರ) ಬಸವೇಶ್ವರ ಕಾಲೇಜು ಬಳಿ ಇರುವ ರಾಜಾಜಿನಗರ ಇವುಗಳಲ್ಲಿ ಲಭ್ಯವಿರುವ ಎಲ್ಲಾ ಕಂಪ್ಯೂಟರ್‌ಗಳನ್ನು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಗತ್ಯ ಸಿದ್ಧತೆಗಳನ್ನು ಪ್ರಾಂಶುಪಾಲರುಗಳು ಮಾಡಿಕೊಳ್ಳುವುದು. ಇದಕ್ಕಾಗಿ ಕಛೇರಿಯ ಸಿಬ್ಬಂದಿ ಮತ್ತು ಉಪನ್ಯಾಸಕರುಗಳನ್ನು ನಿಯೋಜಿಸುವುದು.
5. ಕ್ರಮ ಸಂಖ್ಯೆ 5 ರಲ್ಲಿ ಸೂಚಿಸಿರುವಂತೆ ಮೈಸೂರು, ಮಂಗಳೂರು, ಧಾರವಾಡ, ಬಳ್ಳಾರಿ, ದಾವಣಗೆರೆ, ಕಲಬುರಗಿ ಇನ್ನು ಮುಂತಾದ ನಗರ ಪ್ರದೇಶದಲ್ಲಿರುವ ಡಯಟ್‌ಗಳಲ್ಲಿಯೂ ಸಹ ಆನ-ಲೈನ್ ಅರ್ಜಿ ಸಲ್ಲಿಕೆಗೆ ಅವಕಾಶ ಮಾಡಿಕೊಡಲು ಹಾಗೂ ಸಂಬಂಧಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಉಪನಿರ್ದೇಶಕರು(ಆಡಳಿತ) ರವರು ತಮ್ಮ ಜಿಲ್ಲೆಯ ಡಯಟ್ ಪ್ರಾಂಶುಪಾಲರುಗಳ ಸಹಕಾರ ಪಡೆದುಕೊಳ್ಳುವುದು.
6. ಪೋಷಕರು/ಸಾರ್ವಜನಿಕರಿಂದ ಬಂದಿರುವ ಅರ್ಜಿಗಳನ್ನು ಆನ್-ಲೈನ್‌ನಲ್ಲಿ ಅಂದಂದಿಗೆ ಅಪ್‌ಡೇಟ್ ಮಾಡಲು ಹಾಗೂ ಪೋಷಕರು/ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡಲು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿಯೇ ಒಬ್ಬ ಸಿಬ್ಬಂದಿಯನ್ನು ನಿಯೋಜಿಸಲು ಸೂಚಿಸಿದೆ.
7. ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಪ್ರವೇಶ ಪ್ರಕ್ರಿಯೆ ಮುಗಿಯುವವರೆಗೆ (ಬೆಳಗ್ಗೆ: 10:00 ಗಂಟೆಯಿಂದ ಸಂಜೆ 5:30 ರವರೆಗೆ) ಸಹಾಯವಾಣಿಯನ್ನು ನಿರ್ವಹಿಸಲು ಸೂಚಿಸಿದೆ. ಈ ಬಗ್ಗೆ ಪೋಷಕರು ಮತ್ತು ಸಾರ್ವಜನಿಕರಿಗೆ ತಿಳುವಳಿಕೆ ನೀಡಲೂ ಸಹ ತಿಳಿಸಿದೆ.
8. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ಸಮರ್ಪಕವಾಗಿ ಪ್ರವೇಶ ಪ್ರಕ್ರಿಯೆ ಬಗ್ಗೆ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ ಪ್ರತಿದಿನವೂ ಸಹ ಮೇಲ್ವಿಚಾರಣೆ ಮಾಡಲು ಉಪನಿರ್ದೇಶಕರು(ಆಡಳಿತ) ಇವರಿಗೆ ಸೂಚಿಸಿದೆ.
9. ಈಗಾಗಲೇ ವೇಳಾಪಟ್ಟಿಯಲ್ಲಿ ನಿಗದಿಪಡಿಸಿರುವಂತೆ ವೇಳಾಪಟ್ಟಿಯ ಪ್ರಕಾರವೇ ಕರ್ತವ್ಯ ನಿರ್ವಹಿಸಲು ತಿಳಿಸಿದೆ. ಈ ಸಂಬಂಧ ಯಾವುದೇ ವಿಳಂಬಕ್ಕೆ ಅವಕಾಶ ಇರುವುದಿಲ್ಲ.
10. ಉಪನಿರ್ದೇಶಕರು(ಆಡಳಿತ) ಇವರು ರಾಜ್ಯದ ಡಯಟ್ ಪ್ರಾಂಶುಪಾಲರ ಸಹಯೋಗದೊಂದಿಗೆ ನಿಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ವಲಯ/ತಾಲ್ಲೂಕು/ಕ್ಷೇತ್ರ ಶಿಕ್ಷಣಾಧಿಕಾರಿಗಳ ಕೋರಿಕೆಯನ್ನು ಪರಿಗಣಿಸಿ ಅಗತ್ಯ ಸಿಬ್ಬಂದಿ ಮತ್ತು ಗಣಕಯಂತ್ರಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.
11. ಒಂದು ವೇಳೆ (DATA ENTRY OPERATOR) ಡಿಇಓ ಗಳ ಕೊರತೆ ಕಂಡುಬಂದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿಯೇ ಹೆಚ್ಚುವರಿಯಾಗಿ ಪ್ರವೇಶ ಪ್ರಕ್ರಿಯೆ ಮುಗಿಯುವವರೆಗೆ (DATA ENTRY OPERATOR) ಡಿಇಓಗಳನ್ನು ನಿಯೋಜಿಸಿಕೊಳ್ಳಲು ಸೂಚಿಸಿದೆ.

ತಮ್ಮ ನಂಬುಗೆಯ

16/2/16

(ಕೆ.ಎಸ್. ಸತ್ಯಮೂರ್ತಿ, ಭಾಆಸೇ)
ಆಯುಕ್ತರು.

ಪ್ರತಿಯನ್ನು:
1. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ ಪ್ರತಿಯನ್ನು ರವಾನಿಸುತ್ತಾ, ಜಿಲ್ಲಾ ಉಪನಿರ್ದೇಶಕರು(ಆಡಳಿತ) ಇವರ ಕೋರಿಕೆಯಂತೆ ಅಗತ್ಯ ಸಿಬ್ಬಂದಿ ಮತ್ತು ಗಣಕಯಂತ್ರಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಿದೆ.